621 (518) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿ ಪಿ ಎಲ್ ಕಾರ್ಡ್ ಹೊಂದಿರುವವರಿಗೆ ಆರೋಗ್ಯ ವಿಮೆಯ ಸೌಲಭ್ಯವನ್ನು ಒದಗಿಸಲಿರುವ ಸರ್ಕಾರದ ಯೋಜನೆಯ ವಿವರಗಳೇನು?

ಆ) ಯೋಜನೆಯ ಅನುಷ್ಠಾನದ ಪ್ರಥಮ ಹಂತದಲ್ಲಿ ಈ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ನಿರ್ಧರಿಸಿದೆ? ತಾಲ್ಲೂಕುಗಳಲ್ಲಿ ಆ ಕುರಿತು ವಿವರಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 2005–06 ನೇ ಸಾಲಿನಲ್ಲಿ ರಾಜ್ಯದಲ್ಲಿ ಸ್ತ್ರೀಶಕ್ತಿ ಗುಂಪುಗಳಿಗೆ ಸಂಬಂಧ ಪಟ್ಟ ಹಾಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಹಾಗೂ ಇತರ ಬಿಪಿಎಲ್ ಕೆಳಗೆ ಇರುವ ಕುಟುಂಬಗಳಿಗೆ ಭಾರತ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯುನಿವರ್ಸಲ್ ಹೆಲ್ತ್ ಇನ್ಷೂರೆನ್ಸ್ ಸ್ಕೀಂ ಅನ್ನು ಜಾರಿಗೆ ತರುವ ಉದ್ದೇಶದಿಂದ 51,245 ಕುಟುಂಬಗಳನ್ನು ನೊಂದಾಯಿಸಲಾಗಿರುತ್ತದೆ ರಾಜ್ಯದಲ್ಲಿ ಗುರುತಿಸಲಾಗಿರುವ ಆಸ್ಪತ್ರೆಗಳಲ್ಲಿ ಈ ಕುಟುಂಬಗಳ ಸದಸ್ಯರು ಈ ಯೋಜನೆಯ ಲಾಭವನ್ನು ಪಡೆಯಬಹುದಾಗಿದೆ ಇದೇ ಆಧಾರದ ಮೇಲೆ 2006–07ನೇ ಸಾಲಿನಲ್ಲಿ ಸುವರ್ಣ ಸುರಕ್ಷಾ ಆರೋಗ್ಯ ವಿಮಾ ಯೋಜನೆಯನ್ನು ರಾಜ್ಯದ ಭೂ ರಹಿತ ಕೃಷಿ ಕಾರ್ಮಿಕರಿಗೆ ಒದಗಿಸಲು ಯೋಜಿಸಲಾಗಿದೆ ಇದಕ್ಕಾಗಿ ಆಯವ್ಯಯದಲ್ಲಿ 35 ಕೋಟಿ ರೂ ಗಳನ್ನು ಒದಗಿಸಲಾಗಿದೆ

ಆ) ಹೌದು ಪ್ರಾರಂಭಿಕ ಹಂತದಲ್ಲಿ ಪ್ರಯೋಗಿಕವಾಗಿ ಸುಮಾರು 50 ಆಯ್ದ ತಾಲ್ಲೂಕುಗಳಲ್ಲಿ ಈ ಯೋಜನೆಯನ್ನು ಜಾರಿಗೆ ತರಲು ಯೋಜಿಸಲಾಗಿದೆ ಪ್ರತಿ ಕುಟುಂಬದ ಸದಸ್ಯರಿಗೆ ವಿಮಾ ವಂತಿಗೆ ಹಣ ರೂ 548/– ಆಗಿದ್ದು ಇದರಲ್ಲಿ 300 ರೂ ಗಳನ್ನು ಭಾರತ ಸರ್ಕಾರವೂ ಉಳಿದ ಹಣವನ್ನು ಕರ್ನಾಟಕ ಸರ್ಕಾರವೂ ಭರಿಸುತ್ತದೆ ಗರಿಷ್ಠ ರೂ 30,000/– ದವರೆಗೆ ಆರೋಗ್ಯ ಸೌಲಭ್ಯಗಳನ್ನು ಪಡೆಯಬಹುದಾಗಿದೆ

622 (519) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ಮಾಲಾಡಿ ಎಂಬಲ್ಲಿರುವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸಿಬ್ಬಂದಿ ಕೊರತೆ ಹಾಗೂ ಕಟ್ಟಡ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?